## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯಕರ್ನಾಟಕ

ದಿನಾಂಕ : DATE : 19/2/2020

# ಹಿರಿಯ ನಟಿ ಕಿಶೋರಿ ಬಲ್ಲಾಳ್ ನಿಧನ

19/2/20

▫ ವಿಕ ಸುದ್ದಿಲೋಕ ಬೆಂಗಳೂರು

ಕನ್ನಡ ಚಿತ್ರರಂಗದ ಹಿರಿಯ ನಟಿ ಕಿಶೋರಿ ಬಲ್ಲಾಳ್ (82) ಮಂಗಳವಾರ ಬೆಂಗಳೂರಿನಲ್ಲಿ ನಿಧನರಾದರು.



ತೀವ್ರ ಉಸಿರಾಟದ ತೊಂದರೆಯಿಂದ ಬಳಲುತ್ತಿದ್ದ ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. 1960ರಲ್ಲಿ 'ಇವಳೆಂಥಾ ಹೆಂಡತಿ' ಚಿತ್ರದ ಮೂಲಕ ಸ್ಯಾಂಡಲ್‌ವುಡ್‌ಗೆ ಕಾಲಿಟ್ಟ ಕಿಶೋರಿ ಬಲ್ಲಾಳ್, ಕನ್ನಡ ಮಾತ್ರವಲ್ಲದೆ ಹಿಂದಿ ಚಿತ್ರಗಳಲ್ಲೂ ನಟಿಸಿದ್ದರು. ಬಾಲಿವುಡ್ ನಟ ಶಾರುಖ್ ಖಾನ್‌ಗೆ ತಾಯಿಯಾಗಿ 'ಸ್ವದೇಶ್' ಚಿತ್ರದಲ್ಲಿ ನಟಿಸಿದ್ದರು. ದಕ್ಷಿಣ ಕನ್ನಡ ಜಿಲ್ಲೆಯವರಾದ ಕಿಶೋರಿ ಬಲ್ಲಾಳ್ ಭರತನಾಟ್ಯ ಕಲಾವಿದ ಹಾಗೂ ರಂಗಕರ್ಮಿ ಶ್ರೀಪತಿ ಬಲ್ಲಾಳ್ ಅವರನ್ನು ವಿವಾಹವಾಗಿದ್ದರು. ಕನ್ನಡದಲ್ಲಿ ಸ್ಪರ್ಶ, ಕೆಂಪೇಗೌಡ, ರಿಂಗ್ ರೋಡ್, ಅಯ್ಯ, ಗಲಾಟೆ ಮೊದಲಾದ 70ಕ್ಕೂ ಹೆಚ್ಚಿನ ಚಿತ್ರಗಳಲ್ಲಿ ಕಿಶೋರಿ ಬಲ್ಲಾಳ್ ನಟಿಸಿದ್ದಾರೆ. ಇತ್ತೀಚೆಗೆ ಕಿರುತೆರೆಯಲ್ಲಿ 'ಅಮೃತವರ್ಷಿಣಿ' ಧಾರಾವಾಹಿ ಮೂಲಕ ಹೆಚ್ಚು ಗಮನ ಸೆಳೆದಿದ್ದರು. ಸ್ಯಾಂಡಲ್‌ವುಡ್‌ನ ಜನಪ್ರಿಯ ನಿರ್ದೇಶಕರು, ನಟರ ಜತೆ ಕೆಲಸ ಮಾಡಿದ್ದರು. ತಮ್ಮ ಮನೋಜ್ಞ ಅಭಿನಯದ ಮೂಲಕ ಹೆಸರು ಮಾಡಿದ್ದರು. ರಾಜ್ಯೋತ್ಸವ ಪ್ರಶಸ್ತಿ, ನಾಟಕ ಅಕಾಡೆಮಿ ಸೇರಿದಂತೆ ಇವರಿಗೆ ಹಲವು ಪ್ರಶಸ್ತಿಗಳು ಸಂದಿವೆ.

ಕೆಲ ದಿನಗಳ ಹಿಂದೆ ತೀವ್ರ ಉಸಿರಾಟದ ತೊಂದರೆಯಿಂದ ಆಸ್ಪತ್ರೆಗೆ ದಾಖಲಾಗಿದ್ದ ಕಿಶೋರಿ ಬಲ್ಲಾಳ್ ನಿಧನಕ್ಕೆ ಕನ್ನಡ ಚಿತ್ರರಂಗದ ಗಣ್ಯರು ಕಂಬನಿ ಮಿಡಿದಿದ್ದಾರೆ.